# ಕರ್ನಾಟಕ ಲೋಕಾಯುಕ್ತ

ಸಂಖ್ಯೆ: ಕಂಪ್ಲೆಂಟ್\ಉಪಲೋಕ್\ಬಿಡಿ-8098\2015\ಸನಿಕಾಸ-1
DRE-2

ಬಹುಮಹಡಿಗಳ ಕಟ್ಟಡ,
ಡಾ॥ಬಿ.ಆರ್.ಅಂಬೇಡ್ಕರ್ ವೀಧಿ,
ಬೆಂಗಳೂರು, ದಿನಾಂಕ: 31/03/2017

## ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(3)ರ ಅನ್ವಯ ವರದಿ

**ವಿಷಯ:** ಸಾರ್ವಜನಿಕ/ ಸರ್ಕಾರಿ ನೌಕರರಾದ ತುಮಕೂರು ಜಿಲ್ಲೆ ಮತ್ತು ತಾಲ್ಲೂಕ್ ತಹಶೀಲ್ದಾರ್‌ರಾದ ಶ್ರೀ.ಮಾರುತಿ ಪ್ರಸನ್ನ ರವರು ಕರ್ತವ್ಯ ಲೋಪ/ ದುರ್ವರ್ತನೆ ಎಸಗಿರುವ ಬಗ್ಗೆ.

*******

ತುಮಕೂರು ಜಿಲ್ಲೆ ಮತ್ತು ತಾಲ್ಲೂಕ್ ಗೂಳೂರಿನ ಶ್ರೀ.ನಾರಾಯಣಸ್ವಾಮಿ ಬಿನ್ ಲೇ.ರಂಗಯ್ಯ (ಇನ್ನು ಮುಂದೆ "ದೂರುದಾರರು" ಎಂದು ಕರೆಯಲ್ಪಡುತ್ತಾರೆ) ತಮ್ಮ ದೂರಿನಲ್ಲಿ ತುಮಕೂರು ಜಿಲ್ಲೆ ಮತ್ತು ತಾಲ್ಲೂಕ್ ತಹಶೀಲ್ದಾರ್‌ರಾದ ಶ್ರೀ.ಮಾರುತಿ ಪ್ರಸನ್ನ (ಇನ್ನು ಮುಂದೆ "ಎದುರುದಾರರು" ಎಂದು ಕರೆಯಲ್ಪಡುತ್ತಾರೆ) ರವರ ವಿರುದ್ಧ ಕರ್ತವ್ಯ ಲೋಪದ ಬಗ್ಗೆ ನೀಡಿದ ದೂರನ್ನು, ಕರ್ನಾಟಕ ಲೋಕಾಯುಕ್ತ ಕಾಯಿದೆಯ ಕಲಂ 9ರ ಅಡಿಯಲ್ಲಿ ತನಿಖೆಗೆ ತೆಗೆದುಕೊಂಡಿದ್ದಿದೆ.

2. **ದೂರಿನ ಸಂಕ್ಷಿಪ್ತ ವಿವರಣೆ:-** ಶ್ರೀ ಏಳುಮಂದಮ್ಮ ದೇವಾಲಯವು ಗೂಳೂರಿನಿಂದ 1 ಕಿ.ಮೀ. ದೂರದಲ್ಲಿದ್ದು, ದೂರುದಾರರು ಮತ್ತು ಅವರ ಪೂರ್ವಜರು ತಲತಲಾಂತರಗಳಿಂದ ಜನವರಿ, 2014ರವರೆಗೆ ಯಾವುದೇ ಅಡೆತಡೆಯಿಲ್ಲದೆ ಪೂಜಾ ಕಾರ್ಯ ಮಾಡುತ್ತಿದ್ದು, ಇತ್ತೀಚೆಗೆ ಶ್ರೀ.ಶಿವಣ್ಣ ಎಂಬುವವರು ಸದರಿ ದೇವಸ್ಥಾನಕ್ಕೆ ಸೇರಿದ ಜಮೀನಿನಲ್ಲಿ ಕೊಳವೆ ಬಾವಿ ಕೊರೆಯಿಸಿ, ಕಾನೂನುಬಾಹಿರವಾಗಿ ವಿದ್ಯುತ್ ಸಂಪರ್ಕ ಪಡೆದಿದ್ದಾರೆ. ಈ ಬಗ್ಗೆ ಕ್ರಮ ಜರುಗಿಸಲು ಜಿಲ್ಲಾಧಿಕಾರಿಗಳು, ತುಮಕೂರು, ತಹಶೀಲ್ದಾರ್, ತುಮಕೂರು, ಬೆಸ್ಕಾಂ ಶಾಖಾಧಿಕಾರಿಗಳಿಗೆ ದೂರು ನೀಡಿದರೂ ಸಹ ಯಾವುದೇ ಕ್ರಮ ಕೈಗೊಂಡಿಲ್ಲ. ಆದ್ದರಿಂದ, ಸದರಿ ಕೊಳವೆ ಬಾವಿಯನ್ನು ತೆರವುಗೊಳಿಸಿ, ಸದರಿ ದೇವಾಲಯದ ವಿಧಿ-ವಿಧಾನಕ್ಕೆ ಯಾವುದೇ ಅಡಚಣೆಯಾಗದಂತೆ ಕ್ರಮ ಜರುಗಿಸಲು ಕೋರಿದ್ದಾರೆ.

3. ದೂರಿಗೆ ಎದುರುದಾರರಿಂದ ವರದಿಯನ್ನು ಕೇಳಲಾಗಿ, ಎದುರುದಾರರಿಗೆ ಸಾಕಷ್ಟು ಕಾಲಾವಕಾಶ ನೀಡಿದ್ದರೂ, ಸಹ ಯಾವುದೇ ವರದಿಯನ್ನು ಸಲ್ಲಿಸಿಲ್ಲ.

4. ಕಡತ ಮತ್ತು ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಲಾಗಿ, ಕಂಡು ಬರುವ ಅಂಶಗಳೇನೆಂದರೆ:-

ಸರ್ವೆ ನಂ.192/1ರಲ್ಲಿ ಶ್ರೀ ಏಳುಮಂದಮ್ಮ ದೇವಸ್ಥಾನ ಅಸ್ತಿತ್ವದಲ್ಲಿದ್ದು, ದೂರುದಾರ ಮತ್ತು ಅವರ ಪೂರ್ವಜರು ಸದರಿ ದೇವಾಲಯದ ಅರ್ಚಕರಾಗಿದ್ದು, ಸದರಿ ದೇವಸ್ಥಾನಕ್ಕೆ ಸಂಬಂಧಿಸಿದ ಸ್ವತ್ತಿನಲ್ಲಿ ಶ್ರೀ.ಶಿವಣ್ಣ ಎಂಬುವವರು ಒತ್ತುವರಿ ಮಾಡಿ, ಕೊಳವೆ ಬಾವಿ ನಿರ್ಮಿಸಿದ್ದು, ಅದನ್ನು ತೆರವುಗೊಳಿಸುವ ಬಗ್ಗೆ ಗೂಳೂರು ಗ್ರಾಮದ ಸಾರ್ವಜನಿಕರು ಹಾಗೂ ದೂರುದಾರರು ಎದುರುದಾರರಿಗೆ ಹಲವಾರು ಬಾರಿ ದೂರು ಸಲ್ಲಿಸಿದ್ದರೂ ಸಹ ಯಾವುದೇ ಕ್ರಮ ಕೈಗೊಂಡಿಲ್ಲ. ಅಲ್ಲದೇ, ಈ ಬಗ್ಗೆ ತನಿಖೆ ಕೈಗೊಂಡು ವರದಿ ಸಲ್ಲಿಸಲು ಎದುರುದಾರರಿಗೆ ಆದೇಶಿಸಿದ್ದರೂ ಸಹ ಯಾವುದೇ ವರದಿಯನ್ನು ನೀಡಿಲ್ಲ. ಯಾವುದೇ ದೇವಾಲಯದ ಆಸ್ತಿಯನ್ನು ಯಾವುದೇ ಖಾಸಗಿ ವ್ಯಕ್ತಿ ಒತ್ತುವರಿ ಮಾಡಿ, ಕೊಳವೆ ಬಾವಿ ನಿರ್ಮಿಸಿದ್ದಲ್ಲಿ, ಈ ಬಗ್ಗೆ ತನಿಖೆ ನಡೆಸಿ, ಕರ್ನಾಟಕ ಭೂ ಕಂದಾಯ ಅಧಿನಿಯಮ ಅಡಿ ಅನಧಿಕೃತ ಕೊಳವೆ ಬಾವಿಯನ್ನು ತೆರವುಗೊಳಿಸುವ ಬಗ್ಗೆ ಕ್ರಮ ಕೈಗೊಳ್ಳುವುದು ಎದುರುದಾರರ ಕರ್ತವ್ಯವಾಗಿದೆ. ಆದರೆ, ಈ ಬಗ್ಗೆ ಕ್ರಮ ಜರುಗಿಸಲು ಸಾರ್ವಜನಿಕರು ಹಲವಾರು ಬಾರಿ ಎದುರುದಾರರಿಗೆ ದೂರು ಸಲ್ಲಿಸಿದರೂ ಸಹ ಯಾವುದೇ ಕ್ರಮ ಕೈಗೊಳ್ಳದೇ ಕರ್ತವ್ಯ ಲೋಪ ಎಸಗಿದ್ದಾರೆ.

5. ಮೇಲ್ಕಂಡ ಅಂಶಗಳು, ಕಡತದ ಸಂಗತಿಗಳು ಹಾಗೂ ದಾಖಲಾತಿಗಳನ್ನು ಕೂಲಂಕಷವಾಗಿ ಪರಿಶೀಲಿಸಿದಾಗ, ಸದರಿ ಎದುರುದಾರರ ವಿರುದ್ಧದ ನಡವಳಿಯನ್ನು ಕೈಬಿಡಲು ಸೂಕ್ತ/ ಸಮಂಜಸ/ ಸಮಾಧಾನಕರ ಕಾರಣ ಇಲ್ಲವೆಂಬ ಅಭಿಪ್ರಾಯಕ್ಕೆ ಬರಲಾಗಿದೆ.

6. ಕಡತದಲ್ಲಿಯ ಸಂಗತಿಗಳು ಹಾಗೂ ದಾಖಲಾತಿಗಳಿಂದ, ಎದುರುದಾರರು ಸರ್ಕಾರಿ/ ಸಾರ್ವಜನಿಕ ನೌಕರರಾಗಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠೆ ಮತ್ತು ಸರ್ಕಾರಿ ಸೇವಕರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡ ದುರ್ವರ್ತನೆ/ ದುರ್ನಡತೆ ಮೇಲ್ನೋಟಕ್ಕೆ ಕಂಡು ಬರುತ್ತದೆ.

7. ಅದಲ್ಲದೆ, ಎದುರುದಾರರು ಸರ್ಕಾರಿ ನೌಕರರಾಗಿದ್ದು, ಎದುರುದಾರರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿ, 1966ರ ನಿಯಮ 3(1)ರ ಅಡಿಯಲ್ಲಿ ದುರ್ನಡತೆ/ ದುರ್ವರ್ತನೆ ಕಂಡು ಬರುವುದರಿಂದ, ಸದರಿ ಎದುರುದಾರರ ವಿರುದ್ಧ ಇಲಾಖಾ ಶಿಸ್ತು ಕ್ರಮ ಕೈಗೊಳ್ಳಲು ಕರ್ನಾಟಕ ಲೋಕಾಯುಕ್ತ ಕಾಯಿದೆ ಕಲಂ

8098

12(3)ರ ಅಡಿ ಪ್ರದತ್ತವಾದ ಅಧಿಕಾರದಡಿ, ಈಗ, ಈ ವರದಿ ಮೂಲಕ, ಸಕ್ಷಮ ಪ್ರಾಧಿಕಾರಕ್ಕೆ ಶಿಫಾರಸ್ಸು ಮಾಡಲಾಗುತ್ತಿದೆ, ಹಾಗೂ ಎದುರುದಾರರ ವಿರುದ್ಧದ ಇಲಾಖಾ ವಿಚಾರಣೆ ಮಾಡಲು, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957ರ ನಿಯಮ 14(ಎ) ರಡಿ ಈ ಸಂಸ್ಥೆಗೆ ವಹಿಸ ಬೇಕೆಂದೂ ಕೋರಿದೆ.

8. ಹಾಗೆಯೇ, ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ಕಲಂ 12(4)ರ ಪ್ರಕಾರ ಸಕ್ಷಮ ಪ್ರಾಧಿಕಾರವು, ಈ ವರದಿಯ ಮೇಲೆ ಏನು ಕ್ರಮ ಕೈಗೊಂಡಿದೆ ಅಥವಾ ಏನು ಕ್ರಮ ಕೈಗೊಳ್ಳಲಾಗುತ್ತದೆ ಎಂಬುದರ ಬಗ್ಗೆ ಈ ವರದಿಯನ್ನು ಸ್ವೀಕರಿಸಿದ ಮೂರು ತಿಂಗಳೊಳಗೆ ಈ ಪ್ರಾಧಿಕಾರಕ್ಕೆ ತಿಳಿಸಲು ಹೇಳಿದೆ.

[signature] 31-3-17

(ನ್ಯಾಯಾಮೂರ್ತಿ ಸುಬಾಷ್ ಬಿ ಅಡಿ)
ಉಪಲೋಕಾಯುಕ್ತ-2,
ಕರ್ನಾಟಕ ರಾಜ್ಯ.